ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

37

ಇಲಾಖೆ / ವಿಷಯ : DEPARTMENT / SUBJECT: ಗೃಹ - ಸಿ.ಡಿ ಪ್ರಕರಣ

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ    ದಿನಾಂಕ : DATE : 10/3/2021

# ಸೀಡಿ ಕೇಸ್ ವಾಪಸ್: ಪೊಲೀಸರಿಗೆ ದಿನೇಶ್ ಅಧಿಕೃತ ಹೇಳಿಕೆ

## ಮಾಧ್ಯಮಗಳ ಕಣ್ತಪ್ಪಿಸಿ ಠಾಣೆಗೆ ಹಾಜರು ಪೊಲೀಸರು ದೂರು ವಾಪಸಿಗೆ ಒಪ್ತಾರಾ?

• **ಕನ್ನಡಪ್ರಭ ವಾರ್ತೆ** ಬೆಂಗಳೂರು 10/3/21

ಮಾಜಿ ಸಚಿವ ರಮೇಶ್ ಜಾರಕಿಹೊಳಿ ಇದ್ದಾರೆ ಎನ್ನಲಾದ ಸಿ.ಡಿ. ಬಿಡುಗಡೆ ಪ್ರಕರಣಕ್ಕೆ ಸಂಬಂಧಿಸಿದಂತೆ ದೂರು ನೀಡಿದ್ದ ಸಾಮಾಜಿಕ ಕಾರ್ಯಕರ್ತ ದಿನೇಶ್ ಕಲ್ಲಹಳ್ಳಿ ಮಂಗಳವಾರ ರಾತ್ರಿ ಮಾಧ್ಯಮಗಳ ಕಣ್ಣು ತಪ್ಪಿಸಿ ಕಬ್ಬನ್ ಪಾರ್ಕ್ ಪೊಲೀಸ್ ಠಾಣೆಗೆ ದಿಢೀರ್ ಹಾಜರಾಗಿದ್ದಾರೆ.



ಎರಡು ದಿನಗಳ ಹಿಂದೆ ತಮ್ಮ ವಕೀಲರ ಮೂಲಕ ದೂರು ವಾಪಸ್ ಪಡೆಯುವ ಬಗ್ಗೆ ಕಳುಹಿಸಿದ್ದ ಪತ್ರ ಖುದ್ದು ನಾನೇ ಕೈಬರಹದಲ್ಲಿ ಬರೆದಿದ್ದೇನೆ. ಹೀಗಾಗಿ ಈ ಹಿಂದೆ ಕೊಟ್ಟಿದ್ದ ದೂರನ್ನು ವಾಪಸ್ ಪಡೆಯುತ್ತಿದ್ದೇನೆ ಎಂದು ತನಿಖಾಧಿಕಾರಿಗಳ ಎದುರು ಹೇಳಿಕೆ ನೀಡಿದ್ದಾರೆ ಎಂದು ತಿಳಿದು ಬಂದಿದೆ.

ಮಾಜಿ ಸಚಿವರ ವಿರುದ್ಧ ನೀಡಿದ್ದ ಲೈಂಗಿಕ ದೌರ್ಜನ್ಯ ದೂರಿನ ಸಂಬಂಧ ತಮ್ಮ ವಕೀಲರ ಮೂಲಕ ಕಬ್ಬನ್ ಪಾರ್ಕ್ ಠಾಣೆಗೆ ಪತ್ರ ಕಳುಹಿಸಿ ದೂರು ಹಿಂಪಡೆಯುತ್ತಿರುವುದಾಗಿ ದಿನೇಶ್ ಕಲ್ಲಹಳ್ಳಿ ಹೇಳಿದ್ದರು. ಈ ವೇಳೆ ಕ್ರಿಮಿನಲ್ ಕೇಸ್ ಆಗಿರುವ ಕಾರಣ ದೂರುದಾರರೇ ಖುದ್ದು ಠಾಣೆಗೆ ಬರುವಂತೆ ಇನ್‌ಸ್ಪೆಕ್ಟರ್ ಬಿ.ಮಾರುತಿ ಅವರು ಕಲ್ಲಹಳ್ಳಿ ಪರ ವಕೀಲರಿಗೆ ತಿಳಿಸಿದ್ದರು. ಹೀಗಾಗಿ ದಿನೇಶ್ ಕಲ್ಲಹಳ್ಳಿ ಮಂಗಳವಾರ ಖುದ್ದು ಠಾಣೆಗೆ ಬಂದು ದೂರು ವಾಪಸ್ ಪಡೆಯುವುದಾಗಿ ಹೇಳಿಕೆ ನೀಡಿದ್ದಾರೆ. ಕಾನೂನು ಪ್ರಕಾರ ಈ ಬಗ್ಗೆ ಕ್ರಮಕೈಗೊಳ್ಳಲಾಗುವುದು ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಆದರೆ, ಪೊಲೀಸ್ ಮೂಲಗಳ ಪ್ರಕಾರ, ಏಕಾಏಕಿ ಈ ರೀತಿ ದೂರು ಹಿಂಪಡೆಯಲು ಸಾಧ್ಯವಿಲ್ಲ. ಇದೊಂದು ಸೂಕ್ಷ್ಮ ಪ್ರಕರಣವಾಗಿದೆ. ಅಲ್ಲದೆ, ಈಗಾಗಲೇ ದಿನೇಶ್ ಕಲ್ಲಹಳ್ಳಿ ವಿರುದ್ಧ ನಾಲ್ಕು ಪ್ರಕರಣಗಳು ದಾಖಲಾಗಿವೆ. ಈ ಹಿನ್ನೆಲೆಯಲ್ಲಿ ಸದ್ಯಕ್ಕೆ ದೂರು ಹಿಂಪಡೆಯಲು ಸಾಧ್ಯವಿಲ್ಲ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

### ಸೀಡಿ ಕೇಸ್: ಎಫ್‌ಐಆರ್ ದಾಖಲಿಗೆ ಮನವಿ

ಬೆಂಗಳೂರು: ಮಾಜಿ ಸಚಿವ ರಮೇಶ್ ಜಾರಕಿಹೊಳಿ ಮತ್ತು ದಿನೇಶ್ ಕಲ್ಲಹಳ್ಳಿಯ ಮೇಲೆ ದೂರು ಹಾಗೂ ಪ್ರತಿದೂರನ್ನು ದಾಖಲಿಸಬೇಕು. ಇಲ್ಲದಿದ್ದಲ್ಲಿ ಸರ್ಕಾರವೇ ಮಧ್ಯ ಪ್ರವೇಶಿಸಿ ಪರಸ್ಪರರ ವಿರುದ್ಧ ಸ್ವಯಂಪ್ರೇರಿತ (ಸುಮೋಟೋ) ದಾಖಲಿಸಬೇಕೆಂದು ವಕೀಲ ಎಂ.ಎಚ್.ಚಂದ್ರಶೇಖರ್ ಮನವಿ ಮಾಡಿದ್ದಾರೆ. ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಿಡಿ ಪ್ರಕರಣದಲ್ಲಿ ಪರಸ್ಪರರ ಮೇಲೆ ವಾಗ್ದಾಳಿಗಳನ್ನು ಮಾಡಿಕೊಳ್ಳುತ್ತಿರುವ ರಮೇಶ್ ಜಾರಕಿಹೊಳಿ ಹಾಗೂ ದಿನೇಶ್ ಕಲ್ಲಹಳ್ಳಿಯ ವಿರುದ್ಧ ಇದುವರೆಗೂ ಯಾವುದೇ ಎಫ್‌ಐಆರ್ ದಾಖಲಾಗಿಲ್ಲ. ಇದು ನ್ಯಾಯಾಂಗ ವ್ಯವಸ್ಥೆಯ ಮೇಲೆ ವ್ಯತಿರಿಕ್ತ ಪರಿಣಾಮ ಬೀರಲಿದೆ ಎಂದರು.